# ಕರ್ನಾಟಕ ಸರ್ಕಾರದ ನಡವಳಿಗಳು

165

ವಿಷಯ: ಗದಗ್ ಜಿಲ್ಲೆ, ಲಕ್ಷ್ಮೇಶ್ವರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ-I)ಗೆ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ: ನಅಇ 246 ಬೆಮಪ್ರಾ 2006, ದಿನಾಂಕ: 17.08.2006.

(2) ಮುಖ್ಯಾಧಿಕಾರಿ, ಪುರಸಭೆ ಯೋಜನಾ ಪ್ರಾಧಿಕಾರ, ಲಕ್ಷ್ಮೇಶ್ವರ ಇವರ ಪತ್ರ ಸಂಖ್ಯೆ: ಪುಸಲ/ಯೋ/ಪ್ರಾ.ಲ/ಮಾಪ್ಲಾನ್/ವಹಿ/2008-09/579, ದಿನಾಂಕ: 17.01.2009.

(3) ನಿರ್ದೇಶಕರು, ನಗರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ:ನಯೋ(9)/ಉನಿI/ಲಕ್ಷ್ಮೇಶ್ವರ.ಮ.ಯೋ.(ಪ-1)/ಅಂತಿಮ/2009 ರಲ್ಲಿ ದಿನಾಂಕ: 02.03.2009 ರಂದು ನೀಡಿರುವ ಅಭಿಪ್ರಾಯ.

-*-*-

**ಪ್ರಸ್ತಾವನೆ:-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಲಕ್ಷ್ಮೇಶ್ವರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ-1)ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಲಕ್ಷ್ಮೇಶ್ವರ ಪುರಸಭೆ ಯೋಜನಾ ಪ್ರಾಧಿಕಾರವು ಲಕ್ಷ್ಮೇಶ್ವರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ (ಪ-1)ಯ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆ (ಪ-1)ಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಸರ್ಕಾರದ ಅಂತಿಮ ಅನುಮೋದನೆಗೆ ನಗರ ಯೋಜನಾ ಇಲಾಖೆಯ ಮುಖಾಂತರ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರ ನಗರ ಯೋಜನಾ ನಿರ್ದೇಶಕರ ಏಕ ಕಡತದಲ್ಲಿ ಲಕ್ಷ್ಮೇಶ್ವರ ಪಟ್ಟಣದ ಜನಸಂಖ್ಯೆಯು 2021ರಲ್ಲಿ 50,000ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ, ಮಹಾ ಯೋಜನೆ (ಪ-1)ಯನ್ನು ತಯಾರಿಸಲಾಗಿದೆ. ಲಕ್ಷ್ಮೇಶ್ವರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 703 ಹೆಕ್ಟೇರ್ ಪ್ರದೇಶದಲ್ಲಿ 500 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 12ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ ಒಟ್ಟು 500 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 239.61 ಹೆಕ್ಟೇರ್ (ಶೇ.47.92), ವಾಣಿಜ್ಯಕ್ಕಾಗಿ 41.26 ಹೆಕ್ಟೇರ್ (ಶೇ.8.25), ಕೈಗಾರಿಕೆಗಾಗಿ 58.18 ಹೆಕ್ಟೇರ್ (ಶೇ.11.64), ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕಾಗಿ 31.45 ಹೆಕ್ಟೇರ್ (ಶೇ.6.29), ಉದ್ಯಾನವನ/ ಬಯಲು ಜಾಗಗಳಿಗೆ 28.99 ಹೆಕ್ಟೇರ್ (ಶೇ.5.80), ನಾಗರೀಕ ಸೌಲಭ್ಯಕ್ಕಾಗಿ

1.24 ಹೆಕ್ಟೇರ್ (ಶೇ.0.25) ಹಾಗೂ ಸಾರಿಗೆ ಮತ್ತು ಸಂಪರ್ಕ ವಲಯಕ್ಕೆ 99.2 ಹೆಕ್ಟೇರ್ (ಶೇ.19.85) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆ (ಪ-1)ಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆ (ಪ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 126 ಬೆಮಪ್ರಾ 2009,**
**ಬೆಂಗಳೂರು, ದಿನಾಂಕ: 24.06.2009**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಲಕ್ಷ್ಮೇಶ್ವರ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪ-1)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡಲಾಗಿದೆ.

ಮಹಾ ಯೋಜನೆ (ಪ-1)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿ.ಟಿ.ನಾರಾಯಣಸ್ವಾಮಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ ಸದರಿ ಪ್ರಕಟಿತ 100 ಪ್ರತಿಗಳನ್ನು ಈ ಇಲಾಖೆಗೆ ಒದಗಿಸುವಂತೆ ಕೋರಲಾಗಿದೆ.

ಪ್ರತಿಯನ್ನು:
1. ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ ಗದಗ.
2. ನಿರ್ದೇಶಕರು, ನಗರ ಯೋಜನಾ ಇಲಾಖೆ, ಬೆಂಗಳೂರು.
3. ಮುಖ್ಯಾಧಿಕಾರಿ, ಪುರಸಭೆ ಯೋಜನಾ ಪ್ರಾಧಿಕಾರ, ಲಕ್ಷ್ಮೇಶ್ವರ.
4. ಸಹಾಯಕ ನಿರ್ದೇಶಕರು, ನಗರ ಯೋಜನಾ ಇಲಾಖೆ, ಗದಗ-ಬೆಟಗೇರಿ.
5. ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಶಾಖಾ ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.